O.S.118/2016
DW-3

**ಸಾಕ್ಷಿಯನ್ನು ದಿನಾಂಕ 25-03-2026 ರಂದು ಕರೆಸಿ ಸತ್ಯ ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲುಃ- ವಾದಿಯ ಪರ ಶ್ರೀ ಟಿ ಕೆ ಎಂ ವಕೀಲರಿಂದಃ**

**1.** ನನ್ನ ಮಗನ ಹೆಸರು ಹರೀಶ್ ಎಂದರೆ ಸರಿ. ನನ್ನ ಮಗ ಈ ದಾವೆಯಲ್ಲಿ ವಾದಿಯ ಪರವಾಗಿ ಸಾಕ್ಷಿ ನುಡಿದಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಈ ದಾವೆಯನ್ನು ಯಾರು ಯಾರ ವಿರುದ್ಧ ಯಾವ ಆಸ್ತಿಗೆ ಸಂಬಂಧಿಸಿದಂತೆ ಸಲ್ಲಿಸಿರುತ್ತಾರೆಂದು ನನಗೆ ಗೊತ್ತಿಲ್ಲ. ವಾದಿ ಮತ್ತು ಪ್ರತಿವಾದಿಗಳ ನಡುವೆ ಏನು ವ್ಯವಹಾರ ನಡೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ದಾವಾ ಆಸ್ತಿಗೆ ಸಂಬಂಧಿಸಿದಂತೆ ಪ್ರತಿವಾದಿಗಳು ವಾದಿಗೆ ದಿಃ **17.10.2012** ರಲ್ಲಿ ಕ್ರಯದ ಕರಾರು ಪತ್ರವನ್ನು ಬರೆದುಕೊಟ್ಟಿರುತ್ತಾರೆಂದರೆ ನನಗೆ ಗೊತ್ತಿಲ್ಲ. ವಾದಿ ಮತ್ತು ಪ್ರತಿವಾದಿಗಳು ಇದೇ ನ್ಯಾಯಾಲಯದಲ್ಲಿ ರಾಜಿ ಮಾಡಿಕೊಂಡಿರುತ್ತಾರೆಂದರೆ ನನಗೆ ಗೊತ್ತಿಲ್ಲ. ದಿಃ **17.11.2012** ರ ರಾಜಿ ಪತ್ರದ ಪ್ರಕಾರ ದಾವಾ ಆಸ್ತಿಯ ಸ್ವಾಧೀನವನ್ನು ಪ್ರತಿವಾದಿಗಳು ವಾದಿಗೆ ಬಿಟ್ಟು ಕೊಟ್ಟಿರುತ್ತಾರೆಂದರೆ ನನಗೆ ಗೊತ್ತಿಲ್ಲ. ಅಂದಿನಿಂದ ಇಲ್ಲಿಯವರೆಗೂ ದಾವಾ ಆಸ್ತಿಯಲ್ಲಿ ವಾದಿ ಸ್ವಾಧೀನದಲ್ಲಿರುತ್ತಾರೆಂದರೆ ಸರಿಯಲ್ಲ. ದಾವಾ ಆಸ್ತಿಯ ಪಕ್ಕದಲ್ಲಿ ನಮಗೆ ಸೇರಿದ ಯಾವುದೇ ಜಮೀನು ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ವಾದಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

**ಓದಿ ಹೇಳಿ ಕೇಳಿ ಸರಿ ಇರುತ್ತದೆ.**

**ಸಿ.ಜೆ. ಮತ್ತು ಪ್ರ.ದ.ನ್ಯಾದಂ.**
**ಕೊರಟಗೆರೆ**

O.S.118/2016
DW-3

Witness of the Plaintiff by name Vijay R present, filed affidavit in lieu of chief examination and examined as DW-2.

Sri. HVS prays time.

For cross of DW 2 by 07.04.2026.

Civil Judge and JMFC.
*Koratagere.*